ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ	:	70(569)
ಸದಸ್ಯರ ಹೆಸರು	:	ಶ್ರೀ ಎಸ್.ವ್ಹಿ. ಸಂಕನೂರ(ಪದವೀಧರರ ಕ್ಷೇತ್ರ)
ಉತ್ತರಿಸುವ ದಿನಾಂಕ	:	09/03/2020.
ಉತ್ತರಿಸುವ ಸಚಿವರು	:	ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.

ಕ್ರ. ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ 2006ರ ನಂತರ ನೇಮಕಗೊಂಡ ಸಿಬ್ಬಂದಿಗೆ N.P.S ಪಿಂಚಣಿ ಯೋಜನೆ ಜಾರಿ ಮಾಡುವ ಕುರಿತು ಸರ್ಕಾರ ಚಿಂತನೆ ನಡೆಸಿದೆಯೇ;	ಹೌದು.
ಆ)	ಈ ಸಿಬ್ಬಂದಿಗೆ N.P.S ಜಾರಿ ಮಾಡಿದಲ್ಲಿ ಸರ್ಕಾರದ ಮೇಲೆ ಎಷ್ಟು ಆರ್ಥಿಕ ಹೊರೆ ಬೀಳಲಿದೆ ಎಂಬ ಬಗ್ಗೆ ಮಾಹಿತಿಯನ್ನು ಸಂಗ್ರಹ ಮಾಡಲಾಗಿದೆಯೇ? (ವಿವರವಾದ ಮಾಹಿತಿ ನೀಡುವುದು)	ದಿನಾಂಕ:01.04.2006 ರ ಪಿಂಚಣಿ ನೀತಿಯಲ್ಲಿ ಸರ್ಕಾರಿ ಅನುದಾನಿತ ಶಾಲೆಗಳ ನೌಕರರಿಗೆ ಪಿಂಚಣಿ ಒದಗಿಸುವ ಕುರಿತು ಸರ್ಕಾರದ ಆದೇಶ ಸಂಖ್ಯೆ: FD (SPL)04 PET 2005, ದಿನಾಂಕ: 31.03.2006ರ ಕ್ರಮ ಸಂಖ್ಯೆ: 08ರಲ್ಲಿ ಈ ಕೆಳಗಿನಂತೆ ಆದೇಶಿಸಿದೆ. ...(8) ಸಹಾಯಾನುದಾನ ಶಿಕ್ಷಣ ಸಂಸ್ಥೆಗಳ ನೌಕರರಿಗೆ, ಗೊತ್ತು ಮಾಡಿದ ಪ್ರಯೋಜನ ಪಿಂಚಣಿಯನ್ನು, ದಿನಾಂಕ:01.04.2006 ರಂದು ಅಥವಾ ಅದರ ತರುವಾಯ ಸೇರುವ ಹೊಸದಾಗಿ ನೇಮಕಗೊಂಡ ಸಿಬ್ಬಂದಿಗೆ ನಿಲ್ಲಿಸಿ ಬಿಡತಕ್ಕದ್ದು. ನೂತನ ನಿಗದಿತ ವಂತಿಗೆ ಪಿಂಚಣಿ ಯೋಜನೆಯು, ಆಯ್ಕೆಯ ಅವಕಾಶದ ಆಧಾರದ ಮೇಲ ನೌಕರನಿಗೆ ಮತ್ತು ನಿಯೋಜಕನಿಗೆ ಅನ್ವಯವಾಗತಕ್ಕದ್ದು ಮತ್ತು ಆಯ್ಕೆಯ ಅವಕಾಶವನ್ನು ಇಬ್ಬರಿಂದಲೂ ಚಲಾಯಿಸತಕ್ಕುದು. ಆದರೆ, ನಿಯೋಜಕರ ವಂತಿಗೆಯನ್ನು ಸಂಬಂಧಪಟ್ಟ ಸಂಸ್ಥೆಗಳು ಭರಿಸತಕ್ಕುದು. ಆದರೆ ರಾಜ್ಯ ಸರ್ಕಾರವಲ್ಲ. • ಈ ಆದೇಶವು ದಿನಾಂಕ: 01/04/2006ರಿಂದ ಜಾರಿಗೆ ಬಂದಿರುತ್ತದೆ. • ದಿನಾಂಕ: 01/04/2006ರ ನಂತರ ಅನುದಾನಸಹಿತ ಅನುಮೋದನೆಗೊಂಡ ಅನುದಾನಿತ ಖಾಸಗಿ ಶಾಲೆ/ ಕಾಲೇಜುಗಳಲ್ಲಿನ ಸಿಬ್ಬಂದಿಗಳಿಗೆ ಈ ಮೇಲಿನ ನಿಯಮ ಅನ್ವಯವಾಗುತ್ತದೆ. • ಅನುದಾನಿತ ಸಿಬ್ಬಂದಿಗಳ ಸೇವಾ ಸೌಲಭ್ಯಗಳು ಅನುದಾನಸಹಿತವಾಗಿ ಅನುಮೋದನೆಗೊಂಡ ದಿನಾಂಕದಿಂದ

		ಅನ್ವಯವಾಗುತ್ತದೆ. ಆದುದರಿಂದ 2006 ರ ಪೂರ್ವದಲ್ಲಿ ಅನುದಾನರಹಿತವಾಗಿ ನೇಮಕಗೊಂಡ ಸಿಬ್ಬಂದಿಗಳು ದಿನಾಂಕ: 01/04/2006ರ ನಂತರ ಅನುದಾನಕ್ಕೆ ಒಳಪಟ್ಟಲ್ಲಿ ಅಂತಹ ಸಿಬ್ಬಂದಿಗಳು ಹೊಸ ಪಿಂಚಣಿ ಯೋಜನೆ (NPS) ವ್ಯಾಪ್ತಿಗೆ ಒಳಪಡುತ್ತಾರೆ. • ಮೇಲೆ ತಿಳಿಸಿರುವ ಅಂಶಗಳಿಗೆ ಒಳಪಟ್ಟು ಅನುದಾನಿತ ಸಿಬ್ಬಂದಿಗಳು ಇಚ್ಛೆ ಪಟ್ಟಲ್ಲಿ NPS ಯೋಜನೆಗೆ ಒಳಪಡಿಸಬಹುದಾಗಿದೆ. • ಈ ಪಿಂಚಣಿ ಯೋಜನೆಯು ಸಂಪೂರ್ಣವಾಗಿ ಸ್ವ-ಇಚ್ಛಾ (optional) ನೆಲೆಯಲ್ಲಿ ಜಾರಿಗೊಳಿಸುವುದರಿಂದ ಕಡ್ಡಾಯಗೊಳಿಸಲು ಅವಕಾಶವಿರುವುದಿಲ್ಲ. ಈ ಮೇಲ್ಕಂಡ ಮಾಹಿತಿ ಹಿನ್ನೆಲೆಯಲ್ಲಿ ಆರ್ಥಿಕ ಹೊರೆಯ ವಿವರಗಳನ್ನು ಸಂಗ್ರಹಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಸಂಖ್ಯೆ: ಇಪಿ 66 ಎಸ್‌ಇಎಸ್ 2020

(ಎಸ್. ಸುರೇಶ್ ಕುಮಾರ್)

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.